ಸದನದಲ್ಲಿ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೊಂದನೆಯ ಅಧಿವೇಶನ

ಬುಧವಾರ, ದಿನಾಂಕ : 23 ನೇ ಸೆಪ್ಟೆಂಬರ್, 2020

ಜಾತಿವಾರು ಅಭಿವೃದ್ಧಿ ನಿಗಮಗಳ ಕುರಿತು

ಶ್ರೀ ಆರ್.ಬಿ. ತಿಮ್ಮಾಪೂರ (ವಿಧಾನಸಭೆಯಿಂದ ಚುನಾಯಿತರಾದವರು) –

39 (372) ಉಪ ಮುಖ್ಯಮಂತ್ರಿಗಳು ಮತ್ತು ಲೋಕೋಪಯೋಗಿ ಹಾಗೂ ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಸಮಾಜ ಕಲ್ಯಾಣ ಇಲಾಖೆಯಡಿ ಕಾರ್ಯನಿರ್ವಹಿಸುತ್ತಿರುವ ವಿವಿಧ ಜಾತಿವಾರು ಅಭಿವೃದ್ಧಿ ನಿಗಮಗಳು ಯಾವುವು; ಕಳೆದ ಮೂರು ವರ್ಷದಿಂದ ಇದುವರೆಗೆ ಈ ನಿಗಮಗಳಿಗೆ ಬಿಡುಗಡೆ ಮಾಡಲಾದ ಹಣವೆಷ್ಟು; (ವರ್ಷವಾರು ವಿವರ ನೀಡುವುದು)

(ಆ) ಈ ಪೈಕಿ ರಾಯಚೂರು ಜಿಲ್ಲೆಯಲ್ಲಿ ಈ ನಿಗಮಗಳ ಮೂಲಕ ಪ್ರಯೋಜನ ಪಡೆದ ಫಲಾನುಭವಿಗಳ ಸಂಖ್ಯೆ ಎಷ್ಟು; (ತಾಲ್ಲೂಕುವಾರು/ ಯೋಜನಾವಾರು ಮಾಹಿತಿ ನೀಡುವುದು)

(ಇ) ರಾಯಚೂರು ಜಿಲ್ಲೆಯಲ್ಲಿ ಸಮಾಜ ಕಲ್ಯಾಣ ಇಲಾಖೆಯಡಿ ಬರುವ ವಿವಿಧ ಜಾತಿವಾರು ಅಭಿವೃದ್ಧಿ ನಿಗಮಗಳ ಯೋಜನೆಗಳಲ್ಲಿ ಭ್ರಷ್ಟಾಚಾರ ನಡೆದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಈ) ಬಂದಿದ್ದಲ್ಲಿ, ಅಂತಹವರ ವಿರುದ್ಧ ಸರ್ಕಾರ ಕೈಗೊಂಡ ಕ್ರಮಗಳೇನು?